| | |
|---|---|
| ಕರ್ನಾಟಕ ಸರ್ಕಾರ | ಸಿ ಆರ್ ಪಿ ಸಿ 67 |

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.1816/2022**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಖಾಸಿಂ** | | |
| **ತಂದೆ:ಹೆಸರು** | **ರಾಮಣ್ಣ** | **ಪಿಡಬ್ಲೂ:** | **2** |
| **ವಯಸ್ಸು** | **40 ವರ್ಷ** | **ಸಿಡಬ್ಲೂ:** | **3** |
| **ಉದ್ಯೋಗ:** | **ವ್ಯವಸಾಯ** | | |
| **ವಾಸ ಸ್ಥಳ:** | **ಸಾಲಗುಂದಾ .** | | |

**ದಿನಾಂಕ 08-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ::**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-2 ರಲ್ಲಿರುವ ತನ್ನ ಹೆಬ್ಬಟ್ಟಿನ ಗುರುತನ್ನು & 1 ಫೋಟೋವನ್ನು ತೋರಿಸಿದ್ದು, ಅದನ್ನು ನೋಡಿ ಗುರುತಿಸಿದ್ದು, ಫೋಟೋವನ್ನು ನಿಪಿ-3 ಎಂದು ಗುರುತಿಸಲಾಯಿತು. ಸದರಿ ಫೋಟೋವನ್ನು ದೂರುದಾರರ ಮನೆಯ ಮುಂದೆ 5 ವರ್ಷಗಳ ಹಿಂದೆ ಬೆ.11 ರಿಂದ 11-30 ರ ಸುಮಾರಿಗೆ ನಿಪಿ-2 ನ್ನು ಮಾಡಿ ತೆಗೆದ್ದರು. ನಿಪಿ-2 ರಲ್ಲಿ ಬರೆದ ವಿಷಯಗಳ ಬಗ್ಗೆ ನನಗೆ ಗೊತ್ತಿದೆ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಮಾಡಿಕೊಂಡಿಲ್ಲ. ಸಾಕ್ಷಿಗೆ ಮು. ಮಾ. 1 ನ್ನು ತೋರಿಸಲಾಗಿ, ಸಾಕ್ಷಿಯು ಅದನ್ನು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ನಿಮ್ಮ ಸಮಕ್ಷಮ ನಿಪಿ-2 ರ ಕಾಲಕ್ಕೆ ಒಂದು ಜಾಲಿ ಕಟ್ಟಿಗೆಯನ್ನು ವಶಕ್ಕೆ ಪಡೆದಿದ್ದರು, ಸದರಿ ಪಂಚನಾಮೆಯನ್ನು ಬೆ. 10 ರಿಂದ 11 ಗಂಟೆಯ ಕಾಲಕ್ಕೆ ಮಾಡಿದ್ದರು ಎಂದರೆ ಸರಿ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

1. ಘಟನಾ ಸ್ಥಳದ ಸುತ್ತಮುತ್ತ ಏನಿದೆ ಎಂದರೆ ಸಾಕ್ಷಿಯು ಮನೆಗಳಿವೆ, ದಾರಿ ಇದೆ ಎನ್ನುತ್ತಾರೆ. ಚಾಸಾ-1 ರವರು & ಅವರ ಮಕ್ಕಳು ನನಗೆ ಬಹಳ ವರ್ಷಗಳಿಂದ ಪರಿಚಯ ಇದ್ದಾರೆ.

2. ಈ ದಿನ ನನ್ನನ್ನು ನ್ಯಾಯಾಲಯಕ್ಕೆ ಚಾಸಾ-1 ರವರು ಕರೆದುಕೊಂಡು ಬಂದಿದ್ದಾರೆ. ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳಲು ಬಂದಿರುತ್ತೀರಿ ಎಂದರೆ ಸರಿಯಲ್ಲ.

3. ಘಟನೆ ನಡೆದ ಎಷ್ಟು ದಿನಗಳ ನಂತರ ಪಂಚನಾಮೆ ಮಾಡಿದ್ದರು ಎಂದರೆ ಸಾಕ್ಷಿಯು ಮರುದಿನ ಮಾಡಿದ್ದರು ಎನ್ನುತ್ತಾರೆ.

4. ಪೋಲೀಸರು ನನಗೆ ಪಂಚನಾಮೆಗೆ ಬರುವಂತೆ ನೋಟೀಸು ಕೊಟ್ಟಿರಲಿಲ್ಲ.

5. ನಿಮ್ಮ ಸಮಕ್ಷಮ ಮು ಮಾ 1 ನ್ನು ಜಪ್ತು ಮಾಡಿಲ್ಲ ಎಂದರೆ ಸರಿಯಲ್ಲ.

6. ನಿಮ್ಮ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ, ಚಾಸಾ-1 & ಅವರ ಮಕ್ಕಳು ನಿಮಗೆ ಬಹಳ ದಿನಗಳಿಂದ ಪರಿಚಯ ಇದ್ದಾರೆ, ಆದ್ದರಿಂದ ಅವರ ಪರವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

7. ಮು. ಮಾ. 1 ರಂತಹ ಕಟ್ಟಿಗೆ ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿ. ಆ ಕಟ್ಟಿಗೆಗಳನ್ನು ಬಹಳ ದಿನಗಳ ಕಾಲ ಇಟ್ಟರೆ ಹುಳ ಹಿಡಿಯುತ್ತದೆ ಎಂದರೆ ಸರಿ. ಆದ್ದರಿಂದ ನೀವು ಹೇಳಿದ ಕಟ್ಟಿಗೆ ಇದಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.**